ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

**File No:** DTE-ADMI0ACM2/101/2021

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆರಸ್ತೆ, ಬೆಂಗಳೂರು - 560 001.
ದಿನಾಂಕ:16-09-2021

## ತಿದ್ದುಪಡಿ ಆದೇಶ

**ವಿಷಯ:** 2020-21ನೇ ಸಾಲಿನ ಡಿಪ್ಲೋಮಾ ಹಗಲು ಪಾಳೀಯ 02, 04, 06ನೇ ಸೆಮಿಸ್ಟರ್ ಹಾಗೂ ಸಂಜೆ ಪಾಳೀಯ 01, 03, 05ನೇ ಸೆಮಿಸ್ಟರ್ ತರಗತಿಗಳ ಮರು ನಿಗಧಿಪಡಿಸಲಾಗಿರುವ ತಾತ್ಕಾಲಿಕ ಶೈಕ್ಷಣಿಕ ವೇಳಾಪಟ್ಟಿಯ ಕುರಿತು.

**ಉಲ್ಲೇಖ:**
1. ಈ ಕಛೇರಿ ಸುತ್ತೋಲೆ ಪತ್ರ ಸಂ. DTE-ADMI0ACM2/69/2021 ದಿ:15-12-2020 & 02-03-2021.2
2. ಈ ಕಛೇರಿ ಸುತ್ತೋಲೆ ಪತ್ರ ಸಂ. ಡಿಟಿಇ/03/ಎಲ್ಆರ್ಡಿಸಿ/2020-21, ದಿ:01-05-2021.
3. ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಸುತ್ತೋಲೆ ಪತ್ರ ಸಂ. ಕಾಶಿಇ/ಶೈವಿ/107/ಕೋ.ಮಾ.ಸೂ/2020-21, ದಿ:23-07-2021

-0000000-

2020-21ನೇ ಸಾಲಿನಲ್ಲಿ ರಾಜ್ಯದ ಎಲ್ಲಾ ಡಿಪ್ಲೋಮಾ ಕಾಲೇಜುಗಳಲ್ಲಿ ಸರ್ಕಾರದ ಆದೇಶದಲ್ಲಿನ ಪ್ರಮಾಣಿತ ಕಾರ್ಯಚರಣಾ ವಿಧಾನಗಳನ್ನು ಅಳವಡಿಸಿಕೊಂಡು ಶೈಕ್ಷಣಿಕ ಚಟುವಟಿಕೆಗಳನ್ನು ಪ್ರಾರಂಭಿಸಿ, ಪ್ರವೇಶ ಪಡೆದ ಅಭ್ಯರ್ಥಿಗಳಿಗೆ ನಿಗಧಿತ ಅವಧಿಯೊಳಗೆ ಪಾಠ ಪ್ರವಚನಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ತಾತ್ಕಾಲಿಕ ಶೈಕ್ಷಣಿಕ ವೇಳಾಪಟ್ಟಿಯನ್ನು ಉಲ್ಲೇಖ(1)ರ ಈ ಕಛೇರಿ ಸುತ್ತೋಲೆಗಳಲ್ಲಿ ನಿಗಧಿಪಡಿಸಲಾಗಿತ್ತು. ಕೋವಿಡ್-19 ಸಾಂಕ್ರಾಮಿಕ ಸೋಂಕಿನ ಎರಡನೇ ಅಲೆ ತಡೆಗಟ್ಟುವ ಮುಂಜಾಗ್ರತ ಕ್ರಮವಾಗಿ ರಾಜ್ಯಾದ್ಯಂತ ನಿರ್ಬಂಧ ವಿಧಿಸಿದ ಹಿನ್ನಲೆಯಲ್ಲಿ ದಿನಾಂಕ:03-05-2021 ರಿಂದ 2020-21ನೇ ಸಾಲಿನ ಸಮ ಸೆಮಿಸ್ಟರ್ ತರಗತಿಗಳನ್ನು ಆನ್-ಲೈನ್ ಮೂಲಕ ನಿರ್ವಹಿಸಲು ಉಲ್ಲೇಖ(2)ರಲ್ಲಿ ಸೂಚಿಸಲಾಗಿತ್ತು.

ಸರ್ಕಾರದ ಆದೇಶ ಸಂ. ಇಡಿ 197 ಯುಎನ್ಇ 2020, ದಿ:23-07-2021ರಲ್ಲಿ ದಿ:26-07-2021 ರಿಂದ ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್ ಕಾಲೇಜುಗಳನ್ನು ಪ್ರಮಾಣಿತ ಕಾರ್ಯಚರಣಾ ವಿಧಾನಗಳನ್ನು ಅಳವಡಿಸಿಕೊಂಡು ಮಾರ್ಗಸೂಚಿಗಳನ್ವಯ ಪುನಃ ತರಗತಿಗಳನ್ನು ಪ್ರಾರಂಬಿಸುವಂತೆ ಉಲ್ಲೇಖ(3)ರಲ್ಲಿ ಸೂಚಿಸಿದೆ.

ಡಿಪ್ಲೋಮಾ ತರಗತಿಗಳನ್ನು ಪ್ರಮಾಣಿತ ಕಾರ್ಯಚರಣಾ ವಿಧಾನಗಳನ್ನು ಅಳವಡಿಸಿಕೊಂಡು ಮಾರ್ಗಸೂಚಿಗಳನ್ವಯ ಪ್ರಾರಂಭಿಸಲು ನಿಗಧಿಪಡಿಸಲಾಗಿದ್ದ ವೇಳಾಪಟ್ಟಿಯನ್ನು ಪರಿಷ್ಕರಿಸಿ ಈ ಕೆಳಕಂಡಂತೆ ತಾತ್ಕಾಲಿಕ ವೇಳಾಪಟ್ಟಿಯನ್ನು ಮರು ನಿಗಧಿಪಡಿಸಲಾಗಿದೆ.

**2020-21ನೇ ಸಾಲಿನ ತಾತ್ಕಾಲಿಕ ಶೈಕ್ಷಣಿಕ ವೇಳಾಪಟ್ಟಿ**

| ಕ್ರ. ಸಂ. | ಶೈಕ್ಷಣಿಕ ಕಾಯಕ್ರಮ | ಅವದಿ/ದಿನಾಂಕ | |
|---|---|---|---|
| | | ಪ್ರಾರಂಭ | ಮುಕ್ತಾಯ |
| 01 | ಹಗಲು ಪಾಳೀಯ 02, 04, 06ನೇ ಸೆಮಿಸ್ಟರ್ ಹಾಗೂ ಸಂಜೆ ಪಾಳೀಯ 01, 03, 05ನೇ ಸೆಮಿಸ್ಟರ್ ತರಗತಿಗಳ ಪ್ರಾರಂಭ ಮತ್ತು ಮುಕ್ತಾಯ | **03-05-2021** (ಆನ್‌ಲೈನ್ ತರಗತಿಗಳು ಪ್ರಾರಂಭವಾಗಿದೆ) | - |

Scanned with CamScanner

| | | | |
|---|---|---|---|
| 02 | **ಹಗಲು ಪಾಳೀಯ** 02, 04, 06ನೇ ಸೆಮಿಸ್ಟರ್ ಹಾಗೂ **ಸಂಜೆ ಪಾಳೀಯ** 01, 03, 05ನೇ ಸೆಮಿಸ್ಟರ್ ಭೌತಿಕ ತರಗತಿಗಳ ಪ್ರಾರಂಭ ಮತ್ತು ಮುಕ್ತಾಯ | **01-09-2021** | **11-10-2021** |
| 03 | **ಹಗಲು ಪಾಳೀಯ** 06ನೇ ಸೆಮಿಸ್ಟರ್, **ಸಂಜೆ ಪಾಳೀಯ** 05ನೇ ಸೆಮಿಸ್ಟರ್, ಪಿಡಿಐಎಸ್‌ನ 2ನೇ ಸೆಮಿಸ್ಟರ್ ಹಾಗೂ ಎಲ್ಲಾ ಬ್ಯಾಕ್‌ಲಾಗ್ ವಿಷಯಗಳ ಥಿಯರಿ ಪರೀಕ್ಷೆಗಳು | **16-10-2021** | **10-11-2021** |
| 04 | **ಹಗಲು ಪಾಳೀಯ** 06ನೇ ಸೆಮಿಸ್ಟರ್, **ಸಂಜೆ ಪಾಳೀಯ** 05ನೇ ಸೆಮಿಸ್ಟರ್, ಪಿಡಿಐಎಸ್‌ನ 2ನೇ ಸೆಮಿಸ್ಟರ್ ಹಾಗೂ ಎಲ್ಲಾ ಬ್ಯಾಕ್‌ಲಾಗ್ ವಿಷಯಗಳ ಪ್ರಾಯೋಗಿಕ ಪರೀಕ್ಷೆಗಳು | **11-11-2021** | **17-11-2021** |

(*2020-21ನೇ ಸಾಲಿನ ತಾತ್ಕಾಲಿಕ ಶೈಕ್ಷಣಿಕ ವೇಳಾಪಟ್ಟಿಯ, ತುರ್ತು ಅಗತ್ಯ ನೈಸರ್ಗಿಕ ಪರಿಸ್ಥಿತಿಗೆ ಅನುಗುಣವಾಗಿ, ಅಲ್ಪ ಬದಲಾವಣೆಗೆ ಒಳಪಟ್ಟಿರುತ್ತೆ*)

ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಮುನ್ನೆಚರಿಕೆ ಕ್ರಮಗಳನ್ನು ಅನುಸರಿಸಿ, ಪ್ರವೇಶ ಪಡೆದ ಅಭ್ಯರ್ಥಿಗಳಿಗೆ ನಿಯಮಾನುಸಾರ ಪಾಠ ಪ್ರವಚನಗಳನ್ನು ನಡೆಸಲು ಸೂಕ್ತ ವ್ಯವಸ್ಥೆ ಮಾಡುವುದಲ್ಲದೆ, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಮೇಲ್ಕಂಡಂತೆ ಮರು ನಿಗಧಿಪಡಿಸಲಾಗಿರುವ ತಾತ್ಕಾಲಿಕ ಶೈಕ್ಷಣಿಕ ವೇಳಾಪಟ್ಟಿಯನುಸಾರ ಡಿಪ್ಲೋಮಾ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ಸರ್ಕಾರದ ಪ್ರಮಾಣಿತ ಕಾರ್ಯಚರಣಾ ವಿಧಾನದ ಮಾರ್ಗಸೂಚಿಗಳನ್ನು ಅಳವಡಿಸಿಕೊಂಡು ಆದ್ಯತೆಯ ಮೇರೆಗೆ 06ನೇ ಸೆಮಿಸ್ಟರ್‌ನ ವಿದ್ಯಾರ್ಥಿಗಳಿಗೆ ಥಿಯರಿ ಮತ್ತು ಪ್ರಾಯೋಗಿಕ ವಿಶೇಷ ತರಗತಿಗಳನ್ನು ತೆಗೆದುಕೊಳ್ಳುವುದರ ಮೂಲಕ ಪಠ್ಯಕ್ರಮದನ್ವಯ ನಿಗಧಿತ ಅವಧಿಯೊಳಗೆ ಪಾಠ ಪ್ರವಚನಗಳನ್ನು ಹಾಗೂ ಆಂತರಿಕ ಅಂಕಗಳ ಪರೀಕ್ಷೆಗಳನ್ನು ಎಲ್ಲಾ ಸೆಮಿಸ್ಟರ್‌ನ ವಿದ್ಯಾರ್ಥಿಗಳಿಗೆ ಮುಗಿಸುವಲ್ಲಿ ಕ್ರಮತೆಗೆದುಕೊಂಡು ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು ಇವರಿಗೆ ವರದಿ ಮಾಡುವುದು.

ಪ್ರಯುಕ್ತ, ಇದನ್ನು ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪಾಠ ಪ್ರವಚನಗಳನ್ನು ಮುಕ್ತಾಯಗೊಳಿಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.

ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.

**ನಿರ್ದೇಶಕರು**
**ತಾಂತ್ರಿಕ ಶಿಕ್ಷಣ ಇಲಾಖೆ**
**ಬೆಂಗಳೂರು**

ಇವರಿಗೆ,

*ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಹಗಲು ಮತ್ತು ಸಂಜೆ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ*
*- ಸೂಕ್ತ ಕ್ರಮಕ್ಕಾಗಿ ಹಾಗೂ ಅನುಸರಣೆಗಾಗಿ.*

ಪ್ರತಿ:-

1. ಆಯುಕ್ತರ ಆಪ್ತಶಾಖೆಗೆ.
2. ನಿರ್ದೇಶಕರ ಆಪ್ತಶಾಖೆಗೆ.
3. ಜಂಟಿ ನಿರ್ದೇಶಕರು(ಆಡಳಿತ), ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಜಂಟಿ ನಿರ್ದೇಶಕರು(ಪರೀಕ್ಷೆ), ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
5. ಆಡಳಿತಾಧಿಕಾರಿಗಳು, ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
6. ಇ-ಆಡಳಿತ ವಿಭಾಗಕ್ಕೆ - ಸದರಿ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
7. ರಿಜಿಸ್ಟ್ರಾರ್(ಪರೀಕ್ಷೆ), ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು. 8. ಕಛೇರಿ ಪ್ರತಿ.

Scanned with CamScanner